ಕರ್ನಾಟಕ ಸರ್ಕಾರ

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.

DTE-ADMI0ACM2/15/2020

ದಿನಾಂಕ:20-10-2020.

## -:: ಸು ತ್ತೋಲೆ::-

ವಿಷಯ: 2020-21ನೇ ಸಾಲಿನ ಡಿಪ್ಲೋಮಾ ಪ್ರವೇಶ - ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರವೇಶಾವಧಿಯನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ:
1. ಈ ಕಛೇರಿಯ ಪ್ರವೇಶಾಧಿಸೂಚನೆಯ ದಿ:29-08-2020.
2. ಈ ಕಛೇರಿ ಸುತ್ತೋಲೆ ಪತ್ರ ದಿ:03-10-2020
3. ಹಲವು ಖಾಸಗಿ ಪಾಲಿಟೆಕ್ನಿಕ್ ಪ್ರಿನ್ಸಿಪಾಲರುಗಳ ಮನವಿಗಳು.

-0000000-

2020-21ನೇ ಸಾಲಿನ ಪ್ರಥಮ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ, ರಾಜ್ಯದ ಎಲ್ಲಾ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿನ ಪ್ರವೇಶಕ್ಕೆ ಅಂತಿಮ ದಿನಾಂಕ:17-10-2020 ಎಂದು ಉಲ್ಲೇಖ(2)ರ ಈ ಕಛೇರಿ ಸುತ್ತೋಲೆಯಲ್ಲಿ ವಿಸ್ತರಿಸಲಾಗಿತ್ತು.

ಉಲ್ಲೇಖ(3)ರ ಪತ್ರಗಳಲ್ಲಿ ಹಲವು ಪಾಲಿಟೆಕ್ನಿಕ್‌ಗಳಲ್ಲಿ ಇನ್ನೂ ಅನೇಕ ಸ್ಥಾನಗಳು ಖಾಲಿ ಇರುವುದಾಗಿ ಸಂಬಂಧಿಸಿದ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರು ಮಾಹಿತಿ ನೀಡಿ ಪ್ರಸ್ತುತ ಎಸ್‌ಎಸ್‌ಎಲ್‌ಸಿ ಪೂರಕ ಪರೀಕ್ಷಾ ಫಲಿತಾಂಶ ಪ್ರಕಟಗೊಂಡಿರುವುದನ್ನು ಪರಿಗಣಿಸಿ ಪ್ರವೇಶಾವಧಿಯನ್ನು ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳಿಗೂ ಅನ್ವಯವಾಗುವಂತೆ ವಿಸ್ತರಿಸಬೇಕೆಂದು ಕೋರಿರುವುದನ್ನು ಒಟ್ಟಾರೆ ಸಂಸ್ಥೆಗಳ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಪರಿಗಣಿಸಿ **ಪ್ರವೇಶಾವಧಿಯನ್ನು ದಿನಾಂಕ: 29-10-2020 ರವರೆಗೆ ವಿಸ್ತರಿಸಲಾಗಿದೆ.**

ಪ್ರಯುಕ್ತ, ಪ್ರವೇಶಾವಧಿಯನ್ನು ವಿಸ್ತರಿಸಲಾದ ಅವಧಿಯಲ್ಲಿ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಒಟ್ಟಾರೆ ಶೇ.35 ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು. ವಿಸ್ತರಿಸಲಾದ ಪ್ರವೇಶಾವಧಿಯನ್ನು ಆಯಾ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ. ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಸರ್ಕಾರವು ಆಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿಗಳನ್ನು ಹಾಗೂ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್: **http://dtek.karnataka.gov.in** ನ್ನು ನೋಡುವುದು.

*ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.*

ನಿರ್ದೇಶಕರು

***ಇವರಿಗೆ,***

*ಎಲ್ಲಾ ಖಾಸಗಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ - ಮಾಹಿತಿಗಾಗಿ ಮತ್ತು ಸೂಕ್ತ ಅನುಸರಣೆಗಾಗಿ*

ಪ್ರತಿ ಇವರಿಗೆ ಮಾಹಿತಿಗಾಗಿ:
1. ಮಾನ್ಯ ಆಯುಕ್ತರವರ ಆಪ್ತಶಾಖೆಗೆ.
2. ಮಾನ್ಯ ನಿರ್ದೇಶಕರವರ ಆಪ್ತಶಾಖೆಗೆ.
3. ಕಾರ್ಯದರ್ಶಿಯವರ ಆಪ್ತಶಾಖೆಗೆ.
4. ಸಾರ್ವಜನಿಕ ಸಂಪರ್ಕಾಧಿಕಾರಿಯವರಿಗೆ.
5. ಇ-ಗವರ್ನೆನ್ಸ್ ವಿಭಾಗಕ್ಕೆ - ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
6. ಡಿವಿಪಿ(2) ವಿಭಾಗಕ್ಕೆ
7. ಇಆರ್‌ಎಸ್(3) ವಿಭಾಗಕ್ಕೆ 8.ಕಛೇರಿ ಪ್ರತಿ.